SA

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 418 |
| ಸದಸ್ಯರ ಹೆಸರು | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶಿತರು) |
| ಉತ್ತರಿಸಬೇಕಾದ ದಿನಾಂಕ | 10-03-2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಆಯುಷ್ ಇಲಾಖೆಯಲ್ಲಿ ತಾಲ್ಲೂಕು ಆಯುಷ್ ಆಸ್ಪತ್ರೆಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲವೆಂದು ಸಾರ್ವಜನಿಕರಿಂದ ದೂರುಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದಿಯೇ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು; | ಆಯುಷ್ ಇಲಾಖೆಯಲ್ಲಿ ತಾಲ್ಲೂಕು ಆಯುಷ್ ಆಸ್ಪತ್ರೆಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲವೆಂದು ಸಾರ್ವಜನಿಕರಿಂದ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |
| ಆ) | ತಾಲ್ಲೂಕಾ ಆಯುಷ್ ಆಸ್ಪತ್ರೆಗಳು ಸರಿಯಾಗಿ ಕಾರ್ಯ ನಿರ್ವಹಿಸುವಂತಾಗಲು ಹಾಗೂ ಒಳರೋಗಿಗಳ ಚಿಕಿತ್ಸೆಗಾಗಿ ಸೂಕ್ತ ವ್ಯವಸ್ಥೆ ಮಾಡಲು ಯಾವ ಕಾಲಮಿತಿಯೊಳಗೆ ಖಾಯಂ ತಜ್ಞ ವೈದ್ಯರುಗಳ ಹಾಗೂ ಇತರೆ ಸಿಬ್ಬಂದಿಗಳ ನೇಮಕ ಮಾಡಲಾಗುವುದು. | ತಜ್ಞ ವೈದ್ಯರ ಸೇವೆಯನ್ನು ಸಾರ್ವಜನಿಕರಿಗೆ ನೀಡಲು ಈಗಾಗಲೇ ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆಯಡಿ 166 ತಜ್ಞ ವೈದ್ಯರ ಹುದ್ದೆಗಳನ್ನು ತಾತ್ಕಾಲಿಕವಾಗಿ ಸೃಜನೆ ಮಾಡಿ ಸುಮಾರು 83 ತಾಲ್ಲೂಕು ಆಯುಷ್ ಆಸ್ಪತ್ರೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಂಡು ಆಯುಷ್ ಚಿಕಿತ್ಸಾ ಪದ್ಧತಿ ಶಲ್ಯ, ಶಾಲಕ್ಯ, ಪಂಚಕರ್ಮ, ದ್ರವ್ಯಗುಣ, ರಸಶಾಸ್ತ್ರ ಚಿಕಿತ್ಸೆಗಳನ್ನು ನೀಡಲಾಗುತ್ತಿದೆ.<br><br>ತಜ್ಞ ಚಿಕಿತ್ಸೆಗೆ ಅಗತ್ಯವಾದ ಪಂಚಕರ್ಮ ಟೇಬಲ್, ಸ್ಟೀಮ್ ಚೇಂಬರ್, ಶಿರೋಧರ ಟೇಬಲ್, ಧಾರಾ ಸ್ಟ್ಯಾಂಡ್ ಒಳಗೊಂಡಂತೆ ಇತರೆ ಅಗತ್ಯ ವೈದ್ಯಕೀಯ ಉಪಕರಣ, ಔಷಧಿ ಮತ್ತು ಇತರೆ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ. ಯುನಾನಿ ಆಸ್ಪತ್ರೆಗಳಲ್ಲಿ ಕಪಿಂಗ್ ಉಪಕರಣಗಳನ್ನು ಒದಗಿಸಲಾಗಿದೆ ಮತ್ತು ತಜ್ಞ ವೈದ್ಯರಿಗೆ ಸಹಾಯಕವಾಗಿ ಪ್ರತಿ ಆಸ್ಪತ್ರೆಗೆ 06 ಅರೇ ವೈದ್ಯಕೀಯ ಗುತ್ತಿಗೆ ಆಧಾರದ ಸಿಬ್ಬಂದಿಗಳನ್ನು ಒದಗಿಸಲಾಗಿದೆ. ಈ ಸೌಲಭ್ಯಗಳು ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆ ಅಸ್ತಿತ್ವದಲ್ಲಿರುವವರೆಗೆ ಮಾತ್ರ ಚಾಲ್ತಿಯಲ್ಲಿರುತ್ತವೆ.<br><br>ಪ್ರಸ್ತುತ ಇಲಾಖೆಯಲ್ಲಿ 180 ಖಾಯಂ ವೈದ್ಯರುಗಳು ಸ್ನಾತಕೋತ್ತರ ಪದವಿ ಪಡೆದು ಸೇವೆ ಸಲ್ಲಿಸುತ್ತಿದು, ಇವರುಗಳನ್ನು ತಾಲ್ಲೂಕು ಮತ್ತು ಜಿಲ್ಲಾ ಆಯುಷ್ ಆಸ್ಪತ್ರೆಗಳಲ್ಲಿ ತೈನಾತಿಸಿಕೊಂಡು ಸಾರ್ವಜನಿಕರಿಗೆ ಪೂರ್ಣ ಪ್ರಮಾಣದ ವಿವಿಧ ತಜ್ಞತೆಯನುಸಾರ ಸೇವೆಯನ್ನು ನೀಡುವ ಬಗ್ಗೆ ಕ್ರಮವಹಿಸಲಾಗುವುದು. |

ಕಡತ ಸಂಖ್ಯೆ: ಆಕುಕ 63 ಪಿಟಿಡಿ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

SA

## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 418 |
| ಸದಸ್ಯರ ಹೆಸರು | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶಿತರು) |
| ಉತ್ತರಿಸಬೇಕಾದ ದಿನಾಂಕ | 10-03-2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಆಯುಷ್ ಇಲಾಖೆಯಲ್ಲಿ ತಾಲ್ಲೂಕು ಆಯುಷ್ ಆಸ್ಪತ್ರೆಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲವೆಂದು ಸಾರ್ವಜನಿಕರಿಂದ ದೂರುಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದಿಯೇ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು; | ಆಯುಷ್ ಇಲಾಖೆಯಲ್ಲಿ ತಾಲ್ಲೂಕು ಆಯುಷ್ ಆಸ್ಪತ್ರೆಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲವೆಂದು ಸಾರ್ವಜನಿಕರಿಂದ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |
| ಆ) | ತಾಲ್ಲೂಕಾ ಆಯುಷ್ ಆಸ್ಪತ್ರೆಗಳು ಸರಿಯಾಗಿ ಕಾರ್ಯ ನಿರ್ವಹಿಸುವಂತಾಗಲು ಹಾಗೂ ಒಳರೋಗಿಗಳ ಚಿಕಿತ್ಸೆಗಾಗಿ ಸೂಕ್ತ ವ್ಯವಸ್ಥೆ ಮಾಡಲು ಯಾವ ಕಾಲಮಿತಿಯೊಳಗೆ ಖಾಯಂ ತಜ್ಞ ವೈದ್ಯರುಗಳ ಹಾಗೂ ಇತರೆ ಸಿಬ್ಬಂದಿಗಳ ನೇಮಕ ಮಾಡಲಾಗುವುದು. | ತಜ್ಞ ವೈದ್ಯರ ಸೇವೆಯನ್ನು ಸಾರ್ವಜನಿಕರಿಗೆ ನೀಡಲು ಈಗಾಗಲೇ ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆಯಡಿ 166 ತಜ್ಞ ವೈದ್ಯರ ಹುದ್ದೆಗಳನ್ನು ತಾತ್ಕಾಲಿಕವಾಗಿ ಸೃಜನೆ ಮಾಡಿ ಸುಮಾರು 83 ತಾಲ್ಲೂಕು ಆಯುಷ್ ಆಸ್ಪತ್ರೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಂಡು ಆಯುಷ್ ಚಿಕಿತ್ಸಾ ಪದ್ಧತಿ ಶಲ್ಯ, ಶಾಲಕ್ಯ, ಪಂಚಕರ್ಮ, ದ್ರವ್ಯಗುಣ, ರಸಶಾಸ್ತ್ರ ಚಿಕಿತ್ಸೆಗಳನ್ನು ನೀಡಲಾಗುತ್ತಿದೆ.<br><br>ತಜ್ಞ ಚಿಕಿತ್ಸೆಗೆ ಅಗತ್ಯವಾದ ಪಂಚಕರ್ಮ ಟೇಬಲ್, ಸ್ಟೀಮ್ ಚೇಂಬರ್, ಶಿರೋಧರ ಟೇಬಲ್, ಧಾರಾ ಸ್ಟ್ಯಾಂಡ್ ಒಳಗೊಂಡಂತೆ ಇತರೆ ಅಗತ್ಯ ವೈದ್ಯಕೀಯ ಉಪಕರಣ, ಔಷಧಿ ಮತ್ತು ಇತರೆ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ. ಯುನಾನಿ ಆಸ್ಪತ್ರೆಗಳಲ್ಲಿ ಕಪಿಂಗ್ ಉಪಕರಣಗಳನ್ನು ಒದಗಿಸಲಾಗಿದೆ ಮತ್ತು ತಜ್ಞ ವೈದ್ಯರಿಗೆ ಸಹಾಯಕವಾಗಿ ಪ್ರತಿ ಆಸ್ಪತ್ರೆಗೆ 06 ಅರೇ ವೈದ್ಯಕೀಯ ಗುತ್ತಿಗೆ ಆಧಾರದ ಸಿಬ್ಬಂದಿಗಳನ್ನು ಒದಗಿಸಲಾಗಿದೆ. ಈ ಸೌಲಭ್ಯಗಳು ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆ ಅಸ್ತಿತ್ವದಲ್ಲಿರುವವರೆಗೆ ಮಾತ್ರ ಚಾಲ್ತಿಯಲ್ಲಿರುತ್ತವೆ.<br><br>ಪ್ರಸ್ತುತ ಇಲಾಖೆಯಲ್ಲಿ 180 ಖಾಯಂ ವೈದ್ಯರುಗಳು ಸ್ನಾತಕೋತ್ತರ ಪದವಿ ಪಡೆದು ಸೇವೆ ಸಲ್ಲಿಸುತ್ತಿದ್ದು, ಇವರುಗಳನ್ನು ತಾಲ್ಲೂಕು ಮತ್ತು ಜಿಲ್ಲಾ ಆಯುಷ್ ಆಸ್ಪತ್ರೆಗಳಲ್ಲಿ ತೈನಾತಿಸಿಕೊಂಡು ಸಾರ್ವಜನಿಕರಿಗೆ ಪೂರ್ಣ ಪ್ರಮಾಣದ ವಿವಿಧ ತಜ್ಞತೆಯನುಸಾರ ಸೇವೆಯನ್ನು ನೀಡುವ ಬಗ್ಗೆ ಕ್ರಮವಹಿಸಲಾಗುವುದು. |

ಕಡತ ಸಂಖ್ಯೆ: ಆಕುಕ 63 ಪಿಟಿಡಿ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು